RK

# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:23ನೇ ಸೆಪ್ಟೆಂಬರ್, 2021**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 01) 4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್. ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:46 (598) | ಮಾನ್ಯ ಮುಖ್ಯಮಂತ್ರಿಗಳು |
| 02) 4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಆಯನೂರು ಮಂಜುನಾಥ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:48 (610) | |
| 03) 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಯು.ಬಿ. ವೆಂಕಟೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 71 (22) | |
| 04) 6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಅ. ದೇವೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 85 (820) | |
| 05) 6ನೇ ಪಟ್ಟಿಯಿಂದ ತಡೆಹಿಡಿಯಲಾದ **ಡಾ: ತೇಜಸ್ವಿನಿಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 78 (986) | ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು |
| 06) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಸ್.ಎಲ್. ಭೋಜೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 13 (222) | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |
| 07) 7ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಸಿ. ಕೊಂಡಯ್ಯ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 92 (1050) | ಮಾನ್ಯ ಗೃಹ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು ಒಂಭತ್ತನೆಯ ಪಟ್ಟಿ

RK

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

1. **ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು:-**

   ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ ಅನುಪಾಲನಾ ಲೆಕ್ಕಪರಿಶೋಧನಾ ವರದಿಯನ್ನು (2021ನೇ ವರ್ಷದ ವರದಿ ಸಂಖ್ಯೆ:3) ಸಭೆಯ ಮುಂದಿಡುವುದು.

2. ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ

3. ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.

   ಅ) ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2021

   ಆ) ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗಗಳ (ತಿದ್ದುಪಡಿ) ವಿಧೇಯಕ, 2021

   ಇ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2021

## 03. ವರದಿಯನ್ನೊಪ್ಪಿಸುವುದು

**ಶ್ರೀ ಶ್ರೀನಿವಾಸ್ ವಿ. ಮಾನೆ (ಸದಸ್ಯರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ)** ಅವರು 2020-21ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 34ನೇ ವರದಿಯನ್ನೊಪಿಸುವುದು.

## 04. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ** ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು:-

1) ಉದಯ ಅಸೋಸಿಯೇಟ್ಸ್‌ನ ಮಾಲೀಕರಿಂದ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ಅಕ್ರಮವಾಗಿ ನಿರ್ಮಾಣಗೊಳ್ಳುತ್ತಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ, ಒಳಚರಂಡಿ ವ್ಯವಸ್ಥೆ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಒದಗಿಸಲು ಸಹಕಾರ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಕುರಿತು.

2) ಬೆಂಗಳೂರಿನ ಗಾಂಧಿನಗರದಲ್ಲಿರುವ 'ಡಿ' ದರ್ಜೆ ನೌಕರರ ಹೌಸ್ ಬಿಲ್ಡಿಂಗ್ ಕೋ-ಆಪರೇಟಿವ್ ಸೊಸೈಟಿ ಲಿಮಿಟೆಡ್‌ನಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ಬಗ್ಗೆ ತನಿಖೆ ನಡೆಸುವ ಕುರಿತು.

RK

## 5. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

01. **ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2021**

**ಶ್ರೀ ಎಸ್.ಟಿ. ಸೋಮಶೇಖರ್ ( ಮಾನ್ಯ ಸಹಕಾರ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. **ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ವಿಧೇಯಕ, 2021**

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. **ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ, 2021**

**ಶ್ರೀ ಅರಗ ಜ್ಞಾನೇಂದ್ರ ( ಮಾನ್ಯ ಗೃಹ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಪೊಲೀಸು (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. **ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2021**

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. **ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2021**

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

RK

06. **ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ, 2021**

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು, ಸಾರ್ವಜನಿಕ ವಲಯದ ಕೈಗಾರಿಕೆಗಳ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

07. **ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗಗಳ (ತಿದ್ದುಪಡಿ) ವಿಧೇಯಕ, 2021**

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು, ಸಾರ್ವಜನಿಕ ವಲಯದ ಕೈಗಾರಿಕೆಗಳ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

08. **ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2021**

**ಶ್ರೀ ಬಿ.ಸಿ.ನಾಗೇಶ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಎಸ್.ಆರ್.ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು,** ಅವರು ಉತ್ತರ ಕರ್ನಾಟಕ ಭಾಗದ ಅನೇಕ ಖಾಸಗಿ ಸಕ್ಕರೆ ಕಾರ್ಖಾನೆಗಳು ನಷ್ಟ ಅನುಭವಿಸುತ್ತಿದ್ದು, ಸದರಿ ಸಕ್ಕರೆ ಕಾರ್ಖಾನೆಗಳಿಗೆ ಆರ್ಥಿಕ ನೆರವು ನೀಡಿದಂತಹ ಸಹಕಾರಿ ಬ್ಯಾಂಕ್‌ಗಳು ಸಹ ದುಸ್ಥಿತಿಗೆ ಬಂದಿರುವುದರಿಂದ ಕಬ್ಬು ಬೆಳೆಗಾರರ ಪರಿಸ್ಥಿತಿ ದುಸ್ತರವಾಗಿದ್ದು, ಕಬ್ಬು ಬೆಳೆಗಾರರ ಹಾಗೂ ಸಹಕಾರಿ ಬ್ಯಾಂಕ್‌ಗಳನ್ನು ಸುಸ್ಥಿತಿಗೆ ತರುವ ಸಂಬಂಧವಾಗಿ ಸೂಕ್ತ ಮಾರ್ಗೋಪಾಯಗಳನ್ನು ಕಂಡುಕೊಳ್ಳುವ ಕುರಿತು ಪ್ರಸ್ತಾಪಿಸುವುದು.

02 **ಶ್ರೀಯುತರುಗಳಾದ ಬಿ.ಕೆ. ಹರಿಪ್ರಸಾದ್, ಮರಿತಿಬ್ಬೇಗೌಡ ಹಾಗೂ ನಸೀರ್ ಅಹಮದ್** ಅವರುಗಳು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯು "ನೆರೆ-ಹೊರೆಯಲ್ಲಿ ಸಮಾನ ಶಿಕ್ಷಣ ನೀತಿ" ಎಂಬ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿರುವ ಬಗ್ಗೆ ಪ್ರಸ್ತಾಪಿಸುವುದು.

5..

03. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಉತ್ತರ ತಾಲ್ಲೂಕಿನ ಜಾಗಲಟ್ಟಿ ಗ್ರಾಮದ ಸರ್ವೆ ನಂ:83ರಲ್ಲಿ ಕೆಲವು ಭೂಗಳ್ಳರು ಕೆರೆಯ ಮಧ್ಯಭಾಗದಲ್ಲಿ ರಸ್ತೆಯನ್ನು ನಿರ್ಮಿಸಿ ಕೆರೆಯ ಸ್ವರೂಪವನ್ನು ವಿರೂಪಗೊಳಿಸಿ ಭೂಕಬಳಿಕೆ ಮಾಡಿರುವ ಗಂಭೀರ ವಿಷಯದ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ 6 ಜನ ಖಾಯಂ ಸಿಬ್ಬಂದಿಗಳು ಪಿಂಚಣಿ ಹಾಗೂ ಇತರೆ ಸೌಲಭ್ಯಗಳಿಂದ ವಂಚಿತರಾಗಿರುವುದರ ಕುರಿತು ಪ್ರಸ್ತಾಪಿಸುವುದು.

05. **ಶ್ರೀಯುತರುಗಳಾದ ಎಸ್.ಎಲ್.ಭೋಜೇಗೌಡ, ಕೆ.ಟಿ.ಶ್ರೀಕಂಠೇಗೌಡ ಮತ್ತು ಕೆ.ಎ. ತಿಪ್ಪೇಸ್ವಾಮಿ** ಅವರುಗಳು ಮೈಸೂರು ನಗರ ಮತ್ತು ಗ್ರಾಮಾಂತರಗಳ ಸ್ಥಳೀಯ ಸಂಸ್ಥೆಗಳ ಮೂಲಕ ಪರಿಸರ ಸ್ನೇಹಿ ಬಟ್ಟೆ ಬ್ಯಾಗ್‌ಗಳನ್ನು ಸ್ಥಳೀಯ ಸಂಸ್ಥೆಗಳಿಂದ ಅನುಮೋದನೆ ಪಡೆಯದೆ ದುಬಾರಿ ದರದಲ್ಲಿ ಖರೀದಿಸಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗಿರುವ ಕುರಿತು ಪ್ರಸ್ತಾಪಿಸುವುದು.

06. **ಡಾ. ಕೆ. ಗೋವಿಂದರಾಜು** ಅವರು ರಾಜ್ಯದ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಲು ಅನುಕೂಲವಾಗುವ ರೀತಿಯಲ್ಲಿ ಕ್ರೀಡಾ ಕ್ಷೇತ್ರಕ್ಕೆ ಅಂತರಾಷ್ಟ್ರೀಯ ಗುಣಮಟ್ಟದ ಕ್ರೀಡಾ ಸೌಲಭ್ಯವನ್ನು ಒದಗಿಸುವ ನಿಟ್ಟಿನಲ್ಲಿ ಅನುದಾನವನ್ನು ಜಿಲ್ಲಾ ಮಟ್ಟಕ್ಕೆ ಸಿಮೀತಗೊಳಿಸದೆ ವಲಯವಾರು ಮಟ್ಟದಲ್ಲಿ ಅನುದಾನವನ್ನು ನೀಡುವುದರ ಕುರಿತು ಪ್ರಸ್ತಾಪಿಸುವುದು.

07. **ಶ್ರೀಯುತರುಗಳಾದ ಅರುಣ ಶಹಾಪೂರ, ಕೆ.ಟಿ. ಶ್ರೀಕಂಠೇಗೌಡ, ಚಿದಾನಂದ ಎಂ. ಗೌಡ, ಎಸ್.ವ್ಹಿ. ಸಂಕನೂರ, ಶಶೀಲ್ ಜಿ. ನಮೋಶಿ** ಹಾಗೂ ಇತರರು ಅನುದಾನಿತ ಶಾಲಾ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರುಗಳಿಗೆ ಸೇವೆಗೆ ಸೇರಿದ ದಿನಾಂಕದಿಂದ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

## 07. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು.** ಅವರು ಕೃಷ್ಣಾ ನದಿ ಹಾಗೂ ಉಪನದಿಗಳ ನೆರೆ ಹಾವಳಿಯಿಂದ ಬೆಳಗಾವಿ ಜಿಲ್ಲೆಯಲ್ಲಿನ ಪ್ರವಾಹ ಪೀಡಿತ ಪ್ರದೇಶಗಳಲ್ಲಿನ ಬ್ರಿಡ್ಜ್, ಬ್ಯಾರೇಜ್‌ಗಳು ಮತ್ತು ಪೂರಕ ರಸ್ತೆಗಳು ಹಾನಿಗೊಳಗಾಗಿದ್ದು, ಅವುಗಳನ್ನು ಪುನರ್ ನಿರ್ಮಾಣ ಮಾಡುವ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

02 **ಶ್ರೀ ಆರ್. ಪ್ರಸನ್ನ ಕುಮಾರ್** ಅವರು ಕರ್ನಾಟಕ ಪೌರಸಭೆಗಳ ಅಧಿನಿಯಮ ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ ತಿದ್ದುಪಡಿಯಾದ ರೀತ್ಯಾ 2021-2022ನೇ ಸಾಲಿನ ನಗರ ಸ್ಥಳೀಯ ಸಂಸ್ಥೆಗಳ ಆಸ್ತಿ ತೆರಿಗೆಯನ್ನು ಹಿಂದಿನ ಸಾಲುಗಳಿಗಿಂತ ದುಪ್ಪಟ್ಟು ಜಾಸ್ತಿ ಮಾಡಿರುವುದರಿಂದ ವಿವಿಧ ಜಿಲ್ಲೆಗಳಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಹಾಗೂ ಕೊಳಚೆ ಪ್ರದೇಶದಲ್ಲಿ ವಾಸ ಮಾಡುವ ಕಡು ಬಡವರು ಸಂಕಷ್ಟಕ್ಕೊಳಗಾಗಿರುವ ಕುರಿತು ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

RK

03. **ಶ್ರೀಯುತರುಗಳಾದ ಗೋವಿಂದರಾಜು, ಕೆ.ಎ.ತಿಪ್ಪೇಸ್ವಾಮಿ, ಚಿದಾನಂದ ಎಂ. ಗೌಡ, ಎನ್. ಅಪ್ಪಾಜಿಗೌಡ ಹಾಗೂ ಮುನಿರಾಜು ಗೌಡ ಪಿ.ಎಂ.** ಅವರುಗಳು ಕೋಲಾರ ನಗರ ಜಿಲ್ಲೆ ವ್ಯಾಪ್ತಿಯಲ್ಲಿರುವ ಎಲ್ಲಾ ರಸ್ತೆಗಳನ್ನು ದುರಸ್ಥಿಗೊಳಿಸಿ ಅಭಿವೃದ್ಧಿಪಡಿಸಲು ನಗರಸಭೆಯು ಸರ್ಕಾರಕ್ಕೆ ಕೋರಿರುವ ಅನುದಾನವನ್ನು ಬಿಡುಗಡೆ ಮಾಡದೇ ಇರುವುದರಿಂದ ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸಾಧ್ಯವಾಗದೇ ಇರುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

04. **ಡಾ: ತೇಜಸ್ವಿನಿಗೌಡ** ಅವರು ಬೆಂಗಳೂರು ಗ್ರಾಮಾಂತರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಪಂಚಗಿರಿಬೆಟ್ಟ ಶ್ರೇಣಿಗಳ ಬುಡದಲ್ಲಿ ನಿರ್ಮಿಸಲಾಗುತ್ತಿರುವ ರೆಸಾರ್ಟ್‌ಗಳಿಂದ ಈ ಗಿರಿಗಳ ಸದೃಡತೆಗೆ ಅಪಾಯ ಸೃಷ್ಟಿಸಲಾಗುತ್ತಿರುವುದಲ್ಲದೆ ಗ್ರಾಮ ಸಂಸ್ಕೃತಿಯ ಮೇಲೂ ದುಷ್ಪರಿಣಾಮ ಬೀರುವುದರಿಂದ ಹಾಗೂ ಪರಿಸರ ರಕ್ಷಣೆಗಾಗಿ ಅಕ್ರಮ ಭೂಕಬಳಿಕೆಯನ್ನು ತಡೆಗಟ್ಟುವ ಬಗ್ಗೆ ಮಾನ್ಯ ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

05. **ಶ್ರೀಮತಿ ಎಸ್. ವೀಣಾ ಅಚ್ಚಯ್ಯ** ಅವರು ಕೊಡಗು ಜಿಲ್ಲೆಯ ಜಮ್ಮಾ ಆಸ್ತಿಗೆ ಸಂಬಂಧಿಸಿದಂತೆ 2000-2001ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳು ಹೊರಡಿಸಿರುವ ಆದೇಶದ ಪ್ರಕಾರ ಪಟ್ಟೇದಾರರ ಹೆಸರನ್ನು ಆರ್.ಟಿ.ಸಿ.ಯ 3ನೇ ಕಾಲಂನಿಂದ 9ನೇ ಕಾಲಂಗೆ ವರ್ಗಾಹಿಸಲಾಗಿರುವುದರಿಂದ ಪಟ್ಟೇದಾರರ ವಂಶಸ್ಥರಿಗೆ ಇಡೀ ಕುಟುಂಬದ ಆಸ್ತಿಯ ಹಕ್ಕು ಲಭಿಸಿದ್ದು, ಇತರೆ ಸದಸ್ಯರು ಅತಂತ್ರರಾಗಿರುವ ಗಂಭೀರ ಸಮಸ್ಯೆಯ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

06. **ಶ್ರೀ ಹೆಚ್.ಎಂ. ರಮೇಶ್‌ಗೌಡ** ಅವರು ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾನೂನು ಉಲ್ಲಂಘನೆ ಮಾಡಿ ನಿರ್ಮಿಸಲಾಗಿರುವ ಕಟ್ಟಡ/ಮನೆಗಳಿಗೆ ದಂಡ ವಿಧಿಸಿ ಅಕ್ರಮ-ಸಕ್ರಮ ಯೋಜನೆಯಡಿಯಲ್ಲಿ ಸಕ್ರಮಗೊಳಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

07. **ಶ್ರೀ ಪಿ.ಆರ್.ರಮೇಶ್** ಅವರು ಬೆಂಗಳೂರು ನಗರದ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನಕ್ಕೆ ಸೇರಿದ ನೀಲಸಂದ್ರ ಗ್ರಾಮದ ಸರ್ವೆ ನಂ.79ರಲ್ಲಿ 15 ಎಕರೆ 12 ಗುಂಟೆ ಇನಾಮು ಜಮೀನನ್ನು ಕಳೆದ 3-4 ವರ್ಷಗಳಿಂದ 30-40 ಜನರು ಅತಿಕ್ರಮಿಸಿಕೊಂಡು ಮನೆಗಳನ್ನು ಕಟ್ಟುತ್ತಿದ್ದು, ಸದರಿ ಅತಿಕ್ರಮಣಕಾರರ ಹಾಗೂ ಪ್ರಕರಣದಲ್ಲಿ ಭಾಗಿಯಾಗಿರುವವರ ಮೇಲೆ ಕಾನೂನುಗಳಡಿಯಲ್ಲಿ ಸೂಕ್ತ ಕ್ರಮ ಜರುಗಿಸುವ ಕುರಿತು ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

08. **ಶ್ರೀ ಎಸ್.ಆರ್. ಪಾಟೀಲ್. ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಆಯನೂರು ಮಂಜುನಾಥ್** ಅವರುಗಳು ಶ್ರೀ ರಾಘವೇಂದ್ರ ಔರದ್ಕರ್‌ರವರ ವರದಿಯನ್ನು ಅನುಷ್ಠಾನಗೊಳಿಸುವ ಸಂಬಂಧವಾಗಿ ಹಣಕಾಸು ಇಲಾಖೆಯಿಂದ ಪ್ರತಿ ಆದೇಶ ಹೊರಡಿಸಲಾಗಿರುವುದರಿಂದ ಹಿರಿಯ ಹಾಗೂ ಕಿರಿಯ ಸಿಬ್ಬಂದಿಗಳಿಗೆ ಒಂದೇ ವೇತನ ಶ್ರೇಣಿ ನಿಗದಿಪಡಿಸಲಾಗಿರುವುದರಿಂದ ಸಿಬ್ಬಂದಿಗಳಲ್ಲಿ ತಾರತಮ್ಯ ಉಂಟಾಗಿರುವ ವಿಷಯದ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

09 **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಅರುಣ ಶಹಾಪೂರ, ಎಸ್.ವಿ. ಸಂಕನೂರ, ಡಾ: ವೈ.ಎ. ನಾರಾಯಣಸ್ವಾಮಿ ಹಾಗೂ ಚಿದಾನಂದ ಎಂ. ಗೌಡ** ಅವರುಗಳು 2016ರ ಪೂರ್ವದಲ್ಲಿದ್ದ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಹಿಂದಿ ಬಿ.ಎಡ್. ಶಿಕ್ಷಣ ಹೊಂದಿರುವ ಹಿಂದಿ ಭಾಷಾ ಶಿಕ್ಷಕರುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

RM

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವ ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

**01. ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಡಾ. ವೈ.ಎ. ನಾರಾಯಣಸ್ವಾಮಿ ಅವರುಗಳು**

ರಾಜ್ಯದಲ್ಲಿ ಮಕ್ಕಳು ಹಾಗೂ ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸುವ ಕುರಿತು.

**02. ಶ್ರೀಯುತರುಗಳಾದ ಎಸ್.ಆರ್. ಪಾಟೀಲ್(ವಿ.ಪ.ನಾ.), ಎಂ. ನಾರಾಯಣಸ್ವಾಮಿ (ವಿ.ಪ.ಮು.ಸ.), ಪಿ.ಆರ್. ರಮೇಶ್, ಪ್ರಕಾಶ್ ಕೆ. ರಾಥೋಡ್, ಕೆ. ಪ್ರತಾಪಚಂದ್ರ ಶೆಟ್ಟಿ, ಆರ್.ಬಿ. ತಿಮ್ಮಾಪೂರ, ಕೆ. ಹರೀಶ್ ಕುಮಾರ್, ಡಾ: ಕೆ. ಗೋವಿಂದರಾಜು, ಎಸ್. ವೀಣಾ ಅಚ್ಚಯ್ಯ, ಕೆ.ಸಿ. ಕೊಂಡಯ್ಯ, ನಸೀರ್ ಅಹ್ಮದ್, ಅರವಿಂದ ಕುಮಾರ್ ಅರಳಿ, ಮರಿತಿಬ್ಬೇಗೌಡ ಹಾಗೂ ಸಿ.ಎಂ. ಲಿಂಗಪ್ಪ ಅವರುಗಳು**

ಮೈಸೂರು ಜಿಲ್ಲೆಯ ಚಾಮುಂಡಿಪುರದ ರಿಂಗ್ ರಸ್ತೆಯ ಬಳಿ ದಿನಾಂಕ:24.08.2021ರಂದು ಯುವತಿಯ ಮೇಲೆ ನಡೆದ ಸಾಮೂಹಿಕ ಅತ್ಯಾಚಾರದ ತನಿಖೆಯಲ್ಲಿ ಪೊಲೀಸರು ಆರೋಪಿಗಳನ್ನು ರಕ್ಷಿಸುವ ಸಲುವಾಗಿ ಸರ್ವೋಚ್ಚ ನ್ಯಾಯಾಲಯದ ಮಾರ್ಗಸೂಚಿಗಳ ಅನ್ವಯ ಕ್ರಮವಹಿಸದಿರುವ ಕುರಿತು.

## 09. ಅರ್ಧ ಗಂಟೆ ಕಾಲಾವಧಿ ಚರ್ಚೆ

01. ರಾಷ್ಟ್ರೀಯ ಸ್ವಚ್ಛಗಾಳಿ ಕಾರ್ಯಕ್ರಮದಡಿ ರಾಜ್ಯದ ನಗರಗಳನ್ನು ಗುರುತಿಸಿ ನಿರ್ದಿಷ್ಟ ಕ್ರಿಯಾ ಯೋಜನೆಯನ್ನು ರೂಪಿಸುವ ಕುರಿತು ದಿನಾಂಕ:13.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:06(237)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಸಿ. ಕೊಂಡಯ್ಯ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

02 ಮೈಸೂರು ಲ್ಯಾಂಪ್ಸ್ ಕಾರ್ಖಾನೆಯ ಆಸ್ತಿಯನ್ನು ಖಾಸಗಿ ಟ್ರಸ್ಟ್‌ಗೆ ನೀಡಿರುವ ಕುರಿತು ದಿನಾಂಕ:14.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:20(325)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕಾಂತರಾಜು (ಬಿಎಂಎಲ್)** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

03 ರಾಜ್ಯದ ರೈತರ ಕೃಷಿ ಆದಾಯವನ್ನು ದ್ವಿಗುಣಗೊಳಿಸುವ ಯೋಜನೆ ಕುರಿತು ದಿನಾಂಕ:17.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:63(712)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

04 ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಸಂಸ್ಥೆಯಲ್ಲಿ ಉಪಕರಣಗಳ ಖರೀದಿ ಕುರಿತು ದಿನಾಂಕ:20.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:88(956)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪಿ.ಆರ್. ರಮೇಶ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦೫ ರಾಜ್ಯದಲ್ಲಿ ಕೋವಿಡ್-19ಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಆರೋಗ್ಯ ಕೇಂದ್ರ ತೆರೆಯುವ ಕುರಿತು ದಿನಾಂಕ:20.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:89(917)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦೬ ಕೋಲಾರ ಎ.ಪಿ.ಎಂ.ಸಿ. ಮಾರುಕಟ್ಟೆಗೆ ಸ್ಥಳ ಮಂಜೂರು ಮಾಡುವ ಕುರಿತು ದಿನಾಂಕ:21.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:102(1045)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಗೋವಿಂದರಾಜು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦೭ ಬಿ.ಡಿ.ಎ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಕುರಿತು ದಿನಾಂಕ:21.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:93(115)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಆಯನೂರು ಮಂಜುನಾಥ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council/council.htm**